# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : **559**

**ಮಾನ್ಯ ಸದಸ್ಯರ ಹೆಸರು** : **ಡಾ: ಯತೀಂದ್ರ ಎಸ್**

**(ವಿಧಾನಸಭೆಯಿಂದ ಚುನಾಯಿತರಾದವರು)**

**ಉತ್ತರಿಸುವ ದಿನಾಂಕ** : **12-12-2024**

**ಉತ್ತರಿಸುವ ಸಚಿವರು** : **ಗೃಹ ಸಚಿವರು**

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ) | ಗ್ರಾಮೀಣ ಪ್ರದೇಶಗಳಲ್ಲಿ ಕಳೆದ ಐದು ವರ್ಷಗಳಲ್ಲಿ ಎಷ್ಟು ಸೈಬರ್ ಪ್ರಕರಣಗಳು ದಾಖಲಾಗಿವೆ; ಅವುಗಳಲ್ಲಿ ಎಷ್ಟು ಪ್ರಕರಣಗಳನ್ನು ಈಗಾಗಲೇ ವಿಲೆ ಮಾಡಲಾಗಿದೆ; (ವರ್ಷವಾರು ಮಾಹಿತಿ ನೀಡುವುದು) | ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಕಳೆದ ಐದು ವರ್ಷಗಳಲ್ಲಿ ದಾಖಲಾದ ಪ್ರಕರಣಗಳು ಹಾಗೂ ವಿಲೇವಾರಿ ಮಾಡಲಾದ ಪ್ರಕರಣಗಳ ವಿವರಗಳು ಈ ಕೆಳಕಂಡಂತಿದೆ. |

**ನಗರ ಪ್ರದೇಶಗಳಲ್ಲಿ**

| ವರ್ಷವಾರು | ದಾಖಲಾದ ಸೈಬರ್ ಪ್ರಕರಣಗಳು | ವಿಲೇವಾರಿಯಾದ ಪ್ರಕರಣಗಳು |
|---|---|---|
| 2020 | 9332 | 3380 |
| 2021 | 6934 | 2464 |
| 2022 | 10879 | 2934 |
| 2023 | 18820 | 3556 |
| 2024 (30.11.2024) | 17245 | 770 |

**ಜಿಲ್ಲೆ/ಗ್ರಾಮೀಣ ಪ್ರದೇಶಗಳಲ್ಲಿ**

| ವರ್ಷವಾರು | ದಾಖಲಾದ ಸೈಬರ್ ಪ್ರಕರಣಗಳು | ವಿಲೇವಾರಿಯಾದ ಪ್ರಕರಣಗಳು |
|---|---|---|
| 2020 | 1540 | 477 |
| 2021 | 1428 | 450 |
| 2022 | 2000 | 523 |
| 2023 | 3374 | 733 |
| 2024 (30.11.2024) | 3630 | 215 |

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಆ) | ಗ್ರಾಮೀಣ ಪ್ರದೇಶಗಳಲ್ಲಿ ಸೈಬರ್ ಅಪರಾಧಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | **ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಸೈಬರ್ ಅಪರಾಧಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲು ಕೈಗೊಂಡಿರುವ ಕ್ರಮಗಳ ವಿವರಗಳು ಕೆಳಕಂಡಂತಿದೆ.**<br>❖ ಸೈಬರ್ ಅಪರಾಧ ಪ್ರಕರಣಗಳನ್ನು ತಡೆಗಟ್ಟುವ ಹಾಗೂ ಸಾರ್ವಜನಿಕರ ಭದ್ರತೆ ಕಾಪಾಡುವ ನಿಟ್ಟಿನಲ್ಲಿ ನಿರಂತರವಾಗಿ ಆರ್.ಬಿ.ಐ. ಅಧಿಕಾರಿಗಳು, ಬ್ಯಾಂಕ್ ಅಧಿಕಾರಿಗಳು, ಇಂಟರ್ ಮೀಡಿಯಾಗಳು ಮತ್ತು ಇತರೆ ಕಾನೂನು ಜಾರಿ ಸಂಸ್ಥೆಗಳೊಂದಿಗೆ ಸಭೆಗಳನ್ನು ನಡೆಸಿ, |

| | | |
|---|---|---|
| | | ಸೈಬರ್ ಅಪರಾಧಗಳನ್ನು ತಡೆಗಟ್ಟಲು ಹಲವು ಪರಿಣಾಮಕಾರಿ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಸಾರ್ವಜನಿಕರ ಹಿತ ಕಾಪಾಡುವಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ.<br><br>❖ ಸೈಬರ್ ಅಪರಾಧಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರು ಕರ್ನಾಟಕ ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಇತರೆ ಪೊಲೀಸ್ ಠಾಣೆಗಳಲ್ಲಿ ಸಹ ದೂರನ್ನು ದಾಖಲಿಸಬಹುದಾಗಿದೆ. ಅಲ್ಲದೆ ಸೈಬರ್ ಕ್ರೈಂನಿಂದ ವಂಚಿತರಾದವರು ದೂರನ್ನು ನೀಡಲು ಉಚಿತ ಸಹಾಯವಾಣಿ 1930 ಸೇವೆಯನ್ನು ಪ್ರಾರಂಭಿಸಲಾಗಿರುತ್ತದೆ ಮತ್ತು ಸಾರ್ವಜನಿಕರು Cyber ಪೋರ್ಟಲ್ ಮೂಲಕ ಸಹ ದೂರನ್ನು ದಾಖಲಿಸಬಹುದಾಗಿದೆ.<br><br>❖ ಗ್ರಾಮೀಣ ಪ್ರದೇಶಗಳಲ್ಲಿ ಸೈಬರ್ ಅಪರಾಧಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸುವ ಸಲುವಾಗಿ ಬೀಟ್ ಸಭೆಗಳಲ್ಲಿ ಸೈಬರ್ ವಂಚನೆಗಳ ಬಗ್ಗೆ ಹಾಗೂ ಇದರಿಂದ ಮೋಸ ಹೋಗದಂತೆ ಸೂಕ್ತ ಮುಂಜಾಗ್ರತೆ ವಹಿಸುವ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿ .<br><br>❖ ಕಾಲ ಕಾಲಕ್ಕೆ ಉದ್ಯೋಗ ಸ್ಥಳಗಳಲ್ಲಿ, ಸಾಮಾಜಿಕ ಜಾಲತಾಣಗಳಾದ ವಾಟ್ಸಾಪ್, ಟ್ವಿಟರ್, ಫೇಸಬುಕ್‌ಗಳ ಮೂಲಕ ಮತ್ತು ಸರ್ಕಾರಿ ವೆಬ್‌ಸೈಟ್‌ಗಳ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ.<br><br>❖ ಸೈಬರ್ ಅಪರಾಧಗಳ ಕುರಿತು ಸಾರ್ವಜನಿಕರಿಗೆ, ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ, ಚಾಲಕರಿಗೆ, ಮಹಿಳೆಯರಿಗೆ, ಕೂಲಿ ಕಾರ್ಮಿಕರಿಗೆ ಅರಿವು ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br><br>❖ ಮೊಬೈಲ್ ಮತ್ತು ಆನ್‌ಲೈನ್‌ನಲ್ಲಿ ಬರುವ ಜಾಹೀರಾತುಗಳಿಂದ ಹಣದ ಆಮಿಷಗಳಿಗೆ ಒಳಗಾಗದಂತೆ ಪೊಲೀಸ್ ಇಲಾಖೆಯ ಸಾಮಾಜಿಕ ಜಾಲತಾಣದ ಮುಖಾಂತರ ಸಾರ್ವಜನಿಕರಿಗೆ ಮಾಹಿತಿ ನೀಡಿ ಜಾಗೃತಿ ಮೂಡಿಸಲಾಗುತ್ತಿದೆ.<br><br>❖ ಗ್ರಾಮೀಣ ಪ್ರದೇಶಗಳಲ್ಲಿ ರೈತರಿಗೆ ಹಾಗೂ ಮಹಿಳೆಯರಿಗೆ ಸರ್ಕಾರದ ಯೋಜನೆಗಳ ಹೆಸರಿನಲ್ಲಿ ಕರೆ ಮಾಡಿ ಬ್ಯಾಂಕ್ ಖಾತೆಗಳ ಮಾಹಿತಿ ಹಂಚಿಕೊಳ್ಳು ಬರುವ ನಕಲಿ ಕರೆಗಳ ಬಗ್ಗೆ ಎಚ್ಚರ ವಹಿಸುವಂತೆ ಹಾಗೂ ಯಾವುದೇ ಅನಧಿಕೃತ ವ್ಯಕ್ತಿಗಳಿಗೆ ಬ್ಯಾಂಕ್ ಖಾತೆಗಳ ಮಾಹಿತಿ, ಓಟಿಪಿ, ಎಟಿಎಮ್ ಕಾರ್ಡ್ ನಂಬರ್ ಅಥವಾ ಇನ್ನಾವುದೇ ಮಾಹಿತಿ ಹಂಚಿಕೊಳ್ಳದಂ ಜಾಗೃತಿ ಮೂಡಿಸಲಾಗುತ್ತಿದೆ.<br><br>❖ ಸೈಬರ್ ಕ್ರೈಂ ಪ್ರಕರಣಗಳನ್ನು ತಡೆಹಿಡಿಯಲು ಮತ್ತು |

| | | |
|---|---|---|
| | | ಇಂತಹ ಪ್ರಕರಣಗಳಲ್ಲಿ ನೊಂದವರಿಗೆ ನ್ಯಾಯ ದೊರಕಿಸಲು ದೇಶದಾದ್ಯಂತ 1930 ಸೈಬರ್ ಕ್ರೈಂ ಸಹಾಯವಾಣಿಯನ್ನು ತೆರೆದಿದ್ದು, ನೊಂದವರು ಪ್ರಥಮ ಬಾರಿಗೆ 1930 ದಲ್ಲಿ ಕರೆ ಮಾಡಿ ಮೋಸ ಹೋಗಿರುವ ಬಗ್ಗೆ ದೂರು ದಾಖಲಿಸಲು ದಿನದ 24 ಗಂಟೆಗಳೂ ಕಾರ್ಯ ನಿರ್ವಹಿಸುತ್ತಿರುತ್ತದೆ ಹಾಗೂ ಪ್ರತಿ ಜಿಲ್ಲೆಯಲ್ಲಿ ಒಂದು ಸೈಬರ್ ಪೊಲೀಸ್ ಠಾಣೆಯನ್ನು ತೆರೆಯಲಾಗಿದ್ದು (CEN ಪೊಲೀಸ್ ಠಾಣೆ), ಎಲ್ಲಾ ಠಾಣೆಗಳಲ್ಲಿ ಸೈಬರ್ ಲ್ಯಾಬ್ ಗಳನ್ನು ಒದಗಿಸಲಾಗಿರುತ್ತದೆ ಹಾಗೂ ಸಿಐಡಿ ಬೆಂಗಳೂರು ರವರಿಂದ ಕಾಲ ಕಾಲಕ್ಕೆ ಅಧಿಕಾರಿ ಮತ್ತು ಸಿಬ್ಬಂದಿಯವರಿಗೆ ಸೈಬರ್ ಕ್ರೈಂ ತನಿಖೆ ಬಗ್ಗೆ ತರಬೇತಿಯನ್ನು ನೀಡಲಾಗುತ್ತಿದೆ.<br><br>❖ ಠಾಣಾ ಮಟ್ಟದಲ್ಲಿ ಶಾಲಾ/ಕಾಲೇಜುಗಳಿಗೆ ತೆರಳಿ ವಿದ್ಯಾರ್ಥಿಗಳಿಗೆ ಫೇಸ್‌ಬುಕ್, ಇನ್‌ಸ್ಟಾಗ್ರಾಂ, ಹಾಗೂ ವಾಟ್ಸಾಆಪ್ ಇತರೆ ಸಾಮಾಜಿಕ ಜಾಲತಾಣಗಳಲ್ಲಿ ಯಾವುದೇ ಅಪರಿಚಿತ ವ್ಯಕ್ತಿಗಳಿಂದ ಬರುವಂತಹ ಫ್ರೆಂಡ್ ರಿಕ್ವೇಸ್ಟ್ ಅಕ್ಸೆಪ್ಟ್ ಮಾಡದಂತೆ ಹಾಗೂ ಆ ಅಪರಿಚಿತ ವ್ಯಕ್ತಿಗಳೊಂದಿಗೆ ಯಾವುದೇ ಖಾಸಗಿ ಮಾಹಿತಿಗಳನ್ನು ಹಾಗೂ ಫೋಟೋಗಳನ್ನು ಯಾವುದೇ ದಾಖಲಾತಿಗಳನ್ನು ಹಂಚಿಕೊಳ್ಳದಂತೆ ಶಾಲಾ ಕಾಲೇಜುಗಳಲ್ಲಿ ಸೈಬರ್ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜಾಗೃತಿ ಮೂಡಿಸಲಾಗುತ್ತಿದೆ. ಜೊತೆಗೆ ರೇಡಿಯೋ ಪ್ರಸಾರ ಕಾರ್ಯಕ್ರಮಗಳನ್ನು ಸಹ ಮಾಡಲಾಗಿದೆ. ಎಲ್ಲಾ ಸಾರ್ವಜನಿಕ ಸ್ಥಳಗಳಲ್ಲಿ ಕರಪತ್ರ ಹಾಗೂ ಭಿತ್ತಿಪತ್ರಗಳನ್ನು ಹಾಕಿಸಿ ಸೈಬರ್ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.<br><br>❖ ಶಾಲಾ/ಕಾಲೇಜುಗಳಿಗೆ ಭೇಟಿ ನೀಡಿ ಸೈಬರ್ ಅಪರಾಧಗಳ ಬಗ್ಗೆ ಕಾರ್ಯಕ್ರಮ ಮಾಡಿ ತಿಳುವಳಿಕೆ ನೀಡಲಾಗುತ್ತಿದೆ. ಅಲ್ಲದೇ ಸಾಮಾಜಿಕ ಜಾಲತಾಣಗಳ ಮೂಲಕ ಸಾರ್ವಜನಿಕರಿಗೆ/ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಸೈಬರ್ ವಂಚನೆಗೊಳಗಾಗದಂತೆ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. |

ಸಂಖ್ಯೆ: ಹೆಚ್‌ಡಿ 63 ಪಿಸಿಕ್ಯೂ 2024

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು